ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಕೃಷಿ ಪತ್ತಿನ ಸಹಕಾರ ಸಂಘಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿ ಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

239 (1784) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆಯಲ್ಲಿರುವ ಕೃಷಿ ಪತ್ತಿನ ಸಹಕಾರ ಸಂಘಗಳು ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಇಲ್ಲಿಯವರೆಗೆ ಪ್ರತಿ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಸಾಲಮನ್ನಾ ಯೋಜನೆಯಡಿ ಎಷ್ಟು ಹಣ ಬಿಡುಗಡೆಯಾಗಿದೆ ; (ತಾಲ್ಲೂಕುವಾರು ಫಲಾನುಭವಿಗಳ ಹೆಸರು ಮತ್ತು ಸಾಲ ಮನ್ನಾ ಮಾಡಲಾದ ಸಾಲದ ಮೊತ್ತದ ವಿವರ ನೀಡುವುದು)

(ಇ) ಸಾಲಮನ್ನಾ ಯೋಜನೆಯಡಿ ಕೃಷಿ ಪತ್ತಿನ ಸಹಕಾರಿ ಸಂಘಗಳಿಗೆ ಹಣ ಬಿಡುಗಡೆಯಾದರೂ ಸಹ ಫಲಾನುಭವಿಗಳಿಗೆ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸಹಕಾರಿ ಸಂಘದ ಪದಾಧಿಕಾರಿಗಳು ಹಣ ನೀಡದೇ ದುರುಪಯೋಗ ಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)